SDUAHER

THE TIMES OF INDIA

Online Newspaper Clipping Service

Dtd- Tuesday, 25th, September- 2018



# MCI exemption raises hopes of those wanting to study abroad

TIMES NEWS NETWORK

**Bengaluru:** The Medical Council of India's (MCI) decision to allow one-time exemption to aspirants who want to study outside India but have not written the mandatory NEET, has fuelled hopes of many.

Students are lining up in front of counselling centres of foreign universities looking for the best options. Indian students are free to go abroad to study medicine if they have not applied for NEET this year, but if they have written the test and failed to qualify, they cannot apply.

## NEET RULE

"We have over 50 pending applications of students who have excellent academic backgrounds, but did not appear for NEET this year. This notification has opened the doors for these students," said Sivakumar, admission officer at Texila American University (TAU), a university based in the Caribbean that prepares students to practise in the US.

TAU, which admits students in March and September for its 4.5-year MCI-recognized medicine programme in Guyana, has seen a rise in the number of applications post MCI's September 14 notification granting one-time exemption to aspirants who have not written the mandated NEET this year.

The MCI said candidates should obtain an eligibility certificate from the council prior to admission or joining foreign institutes.

However, the notification has left experts concerned about the quality of students who would be studying abroad. Lakshmi Murthy, from the medical excel programme, BASE Educational Services, said, "The key question is are we assuming students who are allowed to apply abroad would have qualified for NEET too? Authorities should make sure deserving students get an opportunity."

## VTU students allege discrepancies in exam system

Alleging discrepancies in the examination and evaluation system of Visvesvaraya Technological University (VTU), students admitted under 2015 Choice Based Credit System (CBCS) scheme staged a protest at Town Hall, Bengaluru, on Monday.

They demanded supplementary exam instead of the year-back system or continuation of "one-time exit scheme" for students of all schemes.

"Following protests by non-CBCS students last year, VTU came up with a 'one-time exit scheme' to address problems arising due to the year-back system. After this, students with a backlog of certain number of papers don't have to repeat a year now. Why is it that we are facing discrimination," asked Deepak B, a third-year engineering student.

Prashant K, a fourth-year student, said, "We have been submitting memoranda to VTU officials as well as higher education minister GT Devegowda to change the scheme for students under 2015 CBCS, but there has been no action from their side."

Students claim about 70,000 students admitted under the 2015 scheme have been deliberately deprived of this benefit.

After students held a protest at the VTU regional office in Belagavi, an urgent meeting was called on September 7, and the critical year-back system was removed. "But the students are demanding supplementary examination and 'one-time exit scheme'," said Lokesh S, a third-year engineering student.

Protesting students showed marksheets to prove that getting 10 more marks through revaluation had become the norm. "On an average, there is an increase of 7-15 marks for students who have failed. VTU seems to be failing students only to make money from revaluation fee (Rs 400 for each answerscript)," said Rajiv NP, a third-year student. TNN

# MCI disqualifies Guj's 'Munnabhai MBBS'

Saeed.Khan@timesgroup.com



**Nevil Patel had his 2009 MBBS degree cancelled as punishment for taking a medical entrance test while a ban against him taking any exam was in force for impersonating two students in a 2012 exam**

**Ahmedabad:** Nevil Patel, a doctor from Patan, has approached the Gujarat high court over the Medical Council of India's decision to cancel his 2009 MBBS degree as punishment for taking a medical entrance test conducted by the National Board of Examinations (NBE) for a super-specialty course (NBE) last year while a ban against his taking any NBE exam was in effect for impersonating two students in a 2012 MBBS entrance exam.

The two students themselves are now medical practitioners. When caught and charged with impersonating the two students, the NBE punished Patel by restraining him from appearing in any of its exams for the next seven years. Patel was then pursuing a Diplomate of National Board (DNB) at St Stephen's College, Delhi.

When the NBE paved the way for the National Entrance-cum-Eligibility Test (NEET) in 2015, Patel decided to take the entrance test for super-specialty courses. In 2017, he applied, was accepted, and was issued an admit card as well. But he was not allowed to take the test at the last moment. Officials cited the seven-year ban. He was also issued a show-cause notice for the cancellation of his degree for applying for the test while the ban was in effect.

The proceedings were shifted to the Delhi Medical Council which decided that Patel cannot practice medicine in Delhi for three years. The decision was challenged in the Delhi high court, which ordered the MCI to re-examine the matter in the next three weeks. The MCI's ethics committee said there was no reason for "extra punishment" as he had already been handed a seven-year ban. According to Patel's lawyer, Rahil Jain, when MCI's ethics committee conveyed its recommendations to the executive committee, the decision was taken to cancel Patel's MBBS degree.

Patel's lawyer said MCI's decision to cancel the MBBS degree was taken without a hearing. "We have challenged the decision," Jain said. "A 2009 MBBS degree cannot be cancelled for an alleged offence committed in 2017. The two students are medical practitioners now," Jain added. After a preliminary hearing, the HC issued notice to MCI, Delhi Medical Council, NBE and Gujarat Medical Council last week.

SDUAHER

ವಿಜಯವಾಣಿ



# ಜಾತ್ಯತೀತತೆ ಮೂಡಿಸಲು ಎನ್ನೆಸ್ಸೆಸ್ ಸಹಕಾರಿ

■ ವಿಜಯವಾಣಿ ಸುದ್ದಿಜಾಲ ಕೋಲಾರ

ವಿದ್ಯಾರ್ಥಿಗಳಲ್ಲಿ ಭೇದ-ಭಾವ ಹೋಗಲಾಡಿಸಿ ನಾವೆಲ್ಲರೂ ಒಂದೇ ಎಂಬ ಜಾತ್ಯತೀತ ಮನೋಭಾವ ಮೂಡಿಸುವಲ್ಲಿ ಎನ್ನೆಸ್ಸೆಸ್ ಕಾರ್ಯಕ್ರಮ ಸಹಕಾರಿಯಾಗಿದೆ ಎಂದು ಕಸಾಪ ಜಿಲ್ಲಾಧ್ಯಕ್ಷ ನಾಗನಂದ ಕೆಂಪರಾಜ್ ಅಭಿಪ್ರಾಯಪಟ್ಟರು.

ನಗರದ ಶ್ರೀ ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯದಲ್ಲಿನ ರಜತ ಮಹೋತ್ಸವ ಸಭಾಂಗಣದಲ್ಲಿ ಸೋಮವಾರ ಆಯೋಜಿಸಿದ್ದ ರಾಷ್ಟ್ರೀಯ ಸೇವಾ ಯೋಜನೆಯ ಸುವರ್ಣ ಮಹೋತ್ಸವದ ಉದ್ಘಾಟನೆ ಹಾಗೂ ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಮಾತನಾಡಿದರು. ವಿದ್ಯಾರ್ಥಿಗಳು ಶಿಕ್ಷಣದೊಂದಿಗೆ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂಬ ಉದ್ದೇಶ ಗಾಂಧೀಜಿ ಅವರದ್ದಾಗಿತ್ತು. ಶ್ರಮದಾನದ ಮೂಲಕ ಗ್ರಾಮೀಣ ಭಾಗಗಳಲ್ಲಿ ಸ್ವಚ್ಛತೆ ಇನ್ನಿತರೆ ಚಟುವಟಿಕೆ ನಿರ್ವಹಿಸಲು ಎನ್ನೆಸ್ಸೆಸ್ ಕಾರ್ಯಕ್ರಮ ಪೂರಕ ಎಂದರು.

ಸಂಸ್ಥೆಯ ಸ್ವಯಂ ಸೇವಕರು ಜೀವನ ಮಟ್ಟ ವೃದ್ಧಿಸಿಕೊಳ್ಳಬಹುದು, ಗ್ರಾಮೀಣ ಪ್ರದೇಶದಲ್ಲಿ ಎನ್ಎಸ್ಎಸ್ ಶಿಬಿರ ನಡೆಸುವ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕೆಲಸವಾಗುತ್ತದೆ ಎಂದರು.

ಶಾಸಕ ಕೆ.ಶ್ರೀನಿವಾಸಗೌಡ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಕೆಲ ವೈದ್ಯರು ಲಾಭಕ್ಕಾಗಿ ಆಸ್ಪತ್ರೆ ಸ್ಥಾಪಿಸಿ ವೃತ್ತಿಗೆ ಧಕ್ಕೆ ಉಂಟು ಮಾಡುವ ಪ್ರಯತ್ನದಲ್ಲಿದ್ದಾರೆ. ಯುವ ವೈದ್ಯರು ವೃತ್ತಿಗೆ ಧಕ್ಕೆಯಾಗದಂತೆ ಆರೋಗ್ಯ ಸೇವೆ ಸಲ್ಲಿಸಬೇಕು ಎಂದರು. ಕುಲಪತಿ ಡಾ.ಎಸ್.ಕುಮಾರ್, ಉಪಕುಲಪತಿ ಡಾ.ಸಿ.ವಿ.ರಘುವೀರ್, ರಿಜಿಸ್ಟ್ರಾರ್ ಡಾ.ಎ.ವಿ.ಎಂ. ಕುಟ್ಟಿ, ಪ್ರಾಂಶುಪಾಲ ಡಾ.ಹರೇಂದ್ರ ಕುಮಾರ್, ಉಪ ಪ್ರಾಂಶುಪಾಲ ಡಾ.ಭಾಸ್ಕರನ್, ವೈದ್ಯಕೀಯ ಅಧೀಕ್ಷಕ ಡಾ.ವಿ.ಲಕ್ಷ್ಮಯ್ಯ, ಎನ್ಎಸ್ಎಸ್ ಯೋಜನಾಧಿಕಾರಿ ಡಾ.ಎಸ್.ಎನ್.ಜಗದೀಶ್ ಇತರರು ಇದ್ದರು.



ಕೋಲಾರದ ಶ್ರೀ ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಸೇವಾ ಯೋಜನೆಯ ಸುವರ್ಣ ಮಹೋತ್ಸವ ಹಾಗೂ ರಕ್ತದಾನ ಶಿಬಿರವನ್ನು ಶಾಸಕ ಕೆ.ಶ್ರೀನಿವಾಸಗೌಡ ಉದ್ಘಾಟಿಸಿದರು. ಕುಲಪತಿ ಡಾ.ಎಸ್.ಕುಮಾರ್, ಉಪಕುಲಪತಿ ಡಾ.ಸಿ.ವಿ. ರಘುವೀರ್ ಇತರರಿದ್ದರು.

# ವೈದ್ಯರಿಗೆ ವೃತ್ತಿ ಕಾಳಜಿ ಅತ್ಯಗತ್ಯ

## ಹಣ, ಲಾಭಕ್ಕಾಗಿ ಆಸ್ಪತ್ರೆ ಸ್ಥಾಪಿಸಿ ವೃತ್ತಿದ್ರೋಹ ಮಾಡದಿರಲು ಶಾಸಕ ಶ್ರೀನಿವಾಸಗೌಡ ಸಲಹೆ

**ಕೋಲಾರ:** ಕೆಲವು ವೈದ್ಯರು ಸಾಮಾಜಿಕ ಕಾಳಜಿ ಮರೆತು ದೇವರೆಂದು ಕಾಣುವ ರೋಗಿಗಳನ್ನು ವಂಚಿಸುತ್ತಿದ್ದಾರೆ, ಹಣ,ಲಾಭಕ್ಕಾಗಿ ತಮ್ಮ ವೃತ್ತಿ ಧರ್ಮಕ್ಕೆ ಮೋಸ ಮಾಡುತ್ತಿದ್ದಾರೆ ಎಂದು ಶಾಸಕ ಕೆ. ಶ್ರೀನಿವಾಸಗೌಡ ವಿಷಾದಿಸಿದರು.



ಕೋಲಾರದ ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಎನ್ ಎಸ್ ಎಸ್ ಘಟಕದಿಂದ ನಡೆದ ರಕ್ತದಾನ ಶಿಬಿರಕ್ಕೆ ಶಾಸಕ ಕೆ.ಶ್ರೀನಿವಾಸಗೌಡ ಚಾಲನೆ ನೀಡಿದರು.

ಸೋಮವಾರ ನಗರದ ದೇವರಾಜ ಅರಸುವೈದ್ಯಕೀಯಮಹಾವಿದ್ಯಾಲಯದಲ್ಲಿ ಎನ್‌ಎಸ್‌ಎಸ್ ಘಟಕದಿಂದ ನಡೆದ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಯುವ ವೈದ್ಯರು ವೃತ್ತಿಗೆ ಧಕ್ಕೆ ಉಂಟಾಗದಂತೆ ಆರೋಗ್ಯ ಸೇವೆ ಸಲ್ಲಿಸಬೇಕು ಎಂದು ಸಲಹೆ ನೀಡಿದ ಅವರು, ವೈದ್ಯರನ್ನು ನಾರಾಯಣನೆಂದು ಕರೆಯುತ್ತಾರೆ. ನೀವು ಹಣ ಮಾಡುವುದು ತಪ್ಪಲ್ಲ, ಅದಕ್ಕೂ ಮಿತಿ ಇರಲಿ ರೋಗಿಗಳ ಹಿತವನ್ನೂ ಕಾಣಬೇಕು ಎಂದರು.

ಬೇರೆ ಬೇರೆ ರಾಜ್ಯಗಳಿಂದ ಆಗಮಿಸಿರುವ ವೈದ್ಯಕೀಯ ವಿದ್ಯಾರ್ಥಿಗಳು ಪದವಿ ಹಂತದಲ್ಲೇ ಕೌಶಲ್ಯ ತರಬೇತಿ ಪಡೆದುಕೊಳ್ಳಬೇಕು. ಯಾವುದೇ ಕಾಯಿಲೆಗೆ ಚಿಕಿತ್ಸೆ ನೀಡಲು ಅನುಭವ ಮುಖ್ಯ. ವ್ಯತ್ಯಾಸವಾದರೆ ಜನ ಸುಮ್ಮನಿರುವುದಿಲ್ಲ, ಇದರಿಂದ ವೃತ್ತಿ ಸೇವೆಗೆ ಪ್ರವೇಶ ಮಾಡುವ ಮೊದಲು ಅನುಭವ ಪಡೆದುಕೊಳ್ಳುವುದು ಸೂಕ್ತ ಎಂದರು.

ರಕ್ತದಾನ ಇಂದು ಹೆಚ್ಚು ಮಹತ್ವ ಪಡೆದುಕೊಳ್ಳುತ್ತಿದೆ, ಜೀವ ಉಳಿಸುವ ಕಾಯಕವಾಗುತ್ತಿದೆ ಎಂದ ಅವರು, ಇತ್ತೀಚಿನ ದಿನಗಳಲ್ಲಿ ವಿವಿಧ ಗುಂಪಿನ ರಕ್ತಕ್ಕೆ ಬೇಡಿಕೆ ಹೆಚ್ಚುತ್ತಿದೆ. ರಕ್ತದಾನ ಮಾಡುವುದರಿಂದ ಆರೋಗ್ಯದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಯುವಕರಿಗೆ ಮನವರಿಕೆ ಮಾಡಿಕೊಡಿ ಎಂದರು.

ರಕ್ತದ ಕೊರತೆಯಿಂದ ಅನಾರೋಗ್ಯಕ್ಕೆ ತುತ್ತಾಗಿರುವ ವ್ಯಕ್ತಿಗೆ ರಕ್ತ ದಾನ ಮಾಡುವ ಮೂಲಕ ಪ್ರಾಣ ಉಳಿಸುವ ಕೆಲಸ ಯುವಕರಿಂದಲೇ ಆಗಬೇಕು ಎಂದು ತಿಳಿಸಿದರು.

ದೇವರಾಜ ಅರಸು ಮೆಡಿಕಲ್ ಕಾಲೇಜು ರಾಷ್ಟ್ರಮಟ್ಟದಲ್ಲಿ ಉತ್ತಮ ಹೆಸರುಗಳಿಸಿರುವ ಮೂಲಕ ದೇಶದ ಇತರೆ ರಾಜ್ಯಗಳಿಂದ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿ ಹೊಂದಲು ಆಡಳಿತ ಮಂಡಳಿ ಪ್ರಮುಖ ಪಾತ್ರವಹಿಸುತ್ತಿದೆ. ಇದು ಈ ಜಿಲ್ಲೆಗೆ ಜಾಲಪ್ಪನವರು ನೀಡಿರುವ ಕೊಡುಗೆ ಎಂದು ಸ್ಮರಿಸಿದರು.

ದೇವರಾಜ ಅರಸು ಉನ್ನತ ಶಿಕ್ಷಣ ಹಾಗೂ ಸಂಶೋಧನ ಸಂಸ್ಥೆಯ ಕುಲಪತಿ ಡಾ.ಎಸ್.ಕುಮಾರ್, ಉಪಕುಲಪತಿ ಡಾ.ಸಿ.ವಿ.ರಘುವೀರ್, ರಿಜಿಸ್ಟ್ರಾರ್ ಡಾ.ಎ.ವಿ.ಎಂ. ಕುಟ್ಟಿ ಪ್ರಾಂಶುಪಾಲ ಡಾ.ಹರೇಂದ್ರ ಕುಮಾರ್, ಉಪ ಪ್ರಾಂಶುಪಾಲ ಡಾ.ಭಾಸ್ಕರನ್, ವೈದ್ಯಕೀಯ ಅಧೀಕ್ಷಕ ಡಾ.ವಿ.ಲಕ್ಷ್ಮಯ್ಯ, ಎನ್‌ಎಸ್‌ಎಸ್ ಯೋಜನಾಧಿಕಾರಿ ಡಾ.ಎಸ್.ಎನ್.ಜಗದೀಶ್ ಹಾಜರಿದ್ದರು.

### ಜಾತ್ಯತೀತ ಮನೋಭಾವ ಅಗತ್ಯ

ಎನ್‌ಎಸ್‌ಎಸ್ ಸಂಸ್ಥೆ ವಿದ್ಯಾರ್ಥಿಗಳಲ್ಲಿ ಜಾತ್ಯತೀತ ಮನೋಭಾವ ಮೂಡಿಸಿ ಭೇದ ಭಾವಗಳನ್ನು ಹೋಗಲಾಡಿಸುತ್ತಿದೆ. ನಾವೆಲ್ಲರೂ ಒಂದೇ ಎಂಬ ಮನೋಭಾವನೆ ಕಲ್ಪಿಸುತ್ತದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಗನಂದ ಕೆಂಪರಾಜ್ ತಿಳಿಸಿದರು.

ಶಿಕ್ಷಣದ ಜತೆಗೆ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂಬ ಉದ್ದೇಶ ಗಾಂಧೀಜಿ ಅವರದಾಗಿತ್ತು. ಸಮಾಜದ ಸಮಸ್ಯೆಗಳನ್ನು ಅರಿಯುವ ಜವಾಬ್ದಾರಿಯುತ ಕರ್ತವ್ಯವನ್ನು ನಿರ್ವಹಿಸಲು ಎನ್‌ಎಸ್‌ಎಸ್ ಸಹಕಾರಿಯಾಗಿದೆ ಎಂದು ಕಿವಿಮಾತು ಹೇಳಿದರು.

ಸಂಸ್ಥೆಯ ಸ್ವಯಂ ಸೇವಕರು ತಮ್ಮ ಜೀವನ ಮಟ್ಟವನ್ನು ವೃದ್ಧಿಸಿಕೊಳ್ಳಬಹುದು. ಗ್ರಾಮೀಣ ಪ್ರದೇಶದಲ್ಲಿ ಎನ್‌ಎಸ್‌ಎಸ್ ಶಿಬಿರಗಳನ್ನು ನಡೆಸುವ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕೆಲಸ ಆಗುತ್ತದೆ. ಪ್ರಕೃತಿ ವಿಕೋಪದ ಸಂದರ್ಭದಲ್ಲಿ ಮಾನವ ನಿರ್ಮಿತ ವಿಪತ್ತುಗಳನ್ನು ನಿಯಂತ್ರಿಸುವ ಪ್ರಯತ್ನ ನಡೆಯುತ್ತದೆ. ಸೇವಾಕಾರ್ಯ ಮೂಲಕ ವ್ಯಕ್ತಿತ್ವಗುಣ ಬೆಳಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಪ್ರಜಾವಾಣಿ








ದೇವರಾಜ ಅರಸು ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆಯ ಎನ್‌ಎಸ್‌ಎಸ್ ಘಟಕವು ಕೋಲಾರದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರದ ಉದ್ಘಾಟನಾ ಸಮಾರಂಭದಲ್ಲಿ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು (ಎಡಚಿತ್ರ). ವಿದ್ಯಾರ್ಥಿಗಳು ರಕ್ತದಾನ ಮಾಡಿದರು

SDUAHER

ವೃತ್ತಿ ಗೌರವಕ್ಕೆ ಧಕ್ಕೆ ತರುತ್ತಿರುವ ಕೆಲ ವೈದ್ಯರು; ರಕ್ತದಾನ ಶಿಬಿರದಲ್ಲಿ ಶಾಸಕ ಕೆ.ಶ್ರೀನಿವಾಸಗೌಡ ಕಳವಳ

# ಹಣ ಮಾಡುವ ದಂಧೆಯಾದ ವೈದ್ಯಕೀಯ ವೃತ್ತಿ

ಪ್ರಜಾವಾಣಿ ವಾರ್ತೆ

ಕೋಲಾರ: 'ಕೆಲ ವೈದ್ಯರು ಹಣ ಸಂಪಾದನೆಗಾಗಿ ಆಸ್ಪತ್ರೆ ತೆರೆದು ವೃತ್ತಿ ಗೌರವಕ್ಕೆ ಧಕ್ಕೆ ತರುತ್ತಿದ್ದಾರೆ. ಅವರನ್ನು ನೆನಪಿಸಿಕೊಂಡರೆ ಬೇಸರವಾಗುತ್ತದೆ' ಎಂದು ಶಾಸಕ ಕೆ.ಶ್ರೀನಿವಾಸಗೌಡ ವಿಷಾದಿಸಿದರು.

ದೇವರಾಜ ಅರಸು ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆಯ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕವು ಇಲ್ಲಿ ಸೋಮವಾರ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರ ಉದ್ಘಾಟಿಸಿ ಮಾತನಾಡಿ, 'ಹಣಕ್ಕಿಂತ ಜೀವ ದೊಡ್ಡದು. ವೈದ್ಯರು ಈ ಸಂಗತಿ ಅರಿತು ವೃತ್ತಿ ಜೀವನದಲ್ಲಿ ಪ್ರಾಮಾಣಿಕತೆ, ಬದ್ಧತೆ ತೋರಿದಾಗ ಮಾತ್ರ ಸಮಾಜದಲ್ಲಿ ಗೌರವ ಗಳಿಸಲು ಸಾಧ್ಯ' ಎಂದರು.

'ದೇಶದಲ್ಲಿ ವೈದ್ಯಕೀಯ ವೃತ್ತಿಯು ಇತ್ತೀಚಿನ ದಿನಗಳಲ್ಲಿ ಹಣ ಮಾಡುವ ದಂಧೆಯಾಗಿದೆ. ವೈದ್ಯರಿಗೆ ಸೇವಾ ಮನೋಭಾವ ಇಲ್ಲವಾಗಿದೆ. ದೇಶದಲ್ಲಿ ವೈದ್ಯಕೀಯ ಪದವಿ ಪಡೆದು ಹಣ ಸಂಪಾದನೆಗಾಗಿ ವಿದೇಶಕ್ಕೆ ಹೋಗುತ್ತಿರುವುದು ವಿಷಾದಕರ' ಎಂದು ಕಳವಳ ವ್ಯಕ್ತಪಡಿಸಿದರು.

**ಮುಖ್ಯಾಂಶಗಳು**

- ವೈದ್ಯರಿಗೆ ಸೇವಾ ಮನೋಭಾವ ಇಲ್ಲ
- ವೃತ್ತಿ ಗೌರವಕ್ಕೆ ಧಕ್ಕೆ ತರುತ್ತಿದ್ದಾರೆ
- ಹಣ ಸಂಪಾದನೆಗಾಗಿ ವಿದೇಶಕ್ಕೆ ಹೋಗುತ್ತಿದ್ದಾರೆ

**ಕೌಶಲ ತರಬೇತಿ:** 'ವೈದ್ಯಕೀಯ ವಿದ್ಯಾರ್ಥಿಗಳು ಪದವಿ ಹಂತದಲ್ಲೇ ಕೌಶಲ ತರಬೇತಿ ಪಡೆದುಕೊಳ್ಳಬೇಕು. ಚಿಕಿತ್ಸೆಯಲ್ಲಿ ಲೋಪವಾದರೆ ಜನ ಸುಮ್ಮನಿರುವುದಿಲ್ಲ. ಆದ್ದರಿಂದ ವೃತ್ತಿ ಬದುಕು ಆರಂಭಕ್ಕೂ ಮುನ್ನ ಕಾರ್ಯಾನುಭವ ಪಡೆದುಕೊಳ್ಳುವುದು ಸೂಕ್ತ. ಪದವಿ ಪಡೆದ ಮಾತ್ರಕ್ಕೆ ವೈದ್ಯ ಎನಿಸಿಕೊಳ್ಳಲು ಆಗುವುದಿಲ್ಲ. ಪ್ರಾಮಾಣಿಕವಾಗಿ ಬಡವರಿಗೆ ಆರೋಗ್ಯ ಸೇವೆ ನೀಡಿದರೆ ಪದವಿಗೆ ಅರ್ಥ ಬರುತ್ತದೆ' ಎಂದು ಕಿವಿಮಾತು ಹೇಳಿದರು.

'ಇತ್ತೀಚಿನ ದಿನಗಳಲ್ಲಿ ರಕ್ತಕ್ಕೆ ಬೇಡಿಕೆ ಹೆಚ್ಚುತ್ತಿದೆ. ರಕ್ತದಾನ ಮಾಡುವುದರಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಆಗುವುದಿಲ್ಲ ಎಂದು ವೈದ್ಯರು ಯುವಕರಿಗೆ ತಿಳಿಸಬೇಕು. ರಕ್ತದಾನದ ಮೂಲಕ ಪ್ರಾಣ ಉಳಿಸುವ ಕೆಲಸ ಯುವಕರಿಂದ ಆಗಬೇಕು. ಯುವ ವೈದ್ಯರು ವೃತ್ತಿ ಗೌರವಕ್ಕೆ ಧಕ್ಕೆ ಬಾರದಂತೆ ಸೇವೆ ಸಲ್ಲಿಸಬೇಕು' ಎಂದು ಸಲಹೆ ನೀಡಿದರು.

'ದೇವರಾಜ ಅರಸು ಶಿಕ್ಷಣ ಸಂಸ್ಥೆಯು ರಾಷ್ಟ್ರ ಮಟ್ಟದಲ್ಲಿ ಹೆಸರುವಾಸಿಯಾಗಿದೆ. ಹೀಗಾಗಿ ಹೊರ ರಾಜ್ಯದ ವಿದ್ಯಾರ್ಥಿಗಳು ಸಹ ಶಿಕ್ಷಣ ಪಡೆಯಲು ಈ ಸಂಸ್ಥೆಗೆ ಬರುತ್ತಿದ್ದಾರೆ. ಸಂಸ್ಥೆಯ ಮುಖ್ಯಸ್ಥ ಜಾಲಪ್ಪ ಅವರು ಜಿಲ್ಲೆಗೆ ಅನನ್ಯ ಕೊಡುಗೆ ನೀಡಿದ್ದಾರೆ' ಎಂದು ಸ್ಮರಿಸಿದರು.

**ಸಮ ಸಮಾಜ:** 'ಎನ್‌ಎಸ್‌ಎಸ್ ಕಾರ್ಯ ಚಟುವಟಿಕೆಗಳು ವಿದ್ಯಾರ್ಥಿಗಳಲ್ಲಿ ಜಾತ್ಯತೀತ ಮನೋಭಾವ ಮೂಡಿಸಿ ಸಮ ಸಮಾಜ ನಿರ್ಮಾಣ ಮಾಡುತ್ತಿವೆ. ಅಲ್ಲದೇ, ನಾವೆಲ್ಲಾ ಒಂದೇ ಎಂಬ ಮನೋಭಾವ ಮೂಡಿಸುತ್ತಿವೆ' ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಗಾನಂದ ಕೆಂಪರಾಜ್ ಅಭಿಪ್ರಾಯಪಟ್ಟರು.

'ಸಮಾಜದ ಸಮಸ್ಯೆಗಳನ್ನು ಅರಿಯುವಲ್ಲಿ ಎನ್‌ಎಸ್‌ಎಸ್ ಸಹಕಾರಿಯಾಗಿದೆ. ಗ್ರಾಮೀಣ ಭಾಗದಲ್ಲಿ ಎನ್‌ಎಸ್‌ಎಸ್ ಶಿಬಿರಗಳು ಸಾರ್ವಜನಿಕರಿಗೆ ಜಾಗೃತಿ ಮೂಡಿಸುತ್ತವೆ. ಸೇವಾ ಕಾರ್ಯದ ಮೂಲಕ ವ್ಯಕ್ತಿತ್ವ ರೂಪಿಸಲು ಸಹಕಾರಿ. ವಿದ್ಯಾರ್ಥಿಗಳು ಓದಿನ ಜತೆಗೆ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು' ಎಂದರು.

ದೇವರಾಜ ಅರಸು ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆ ಕುಲಪತಿ ಡಾ.ಎಸ್.ಕುಮಾರ್, ಉಪಕುಲಪತಿ ಡಾ.ಸಿ.ವಿ.ರಘುವೀರ್, ಕುಲಸಚಿವ ಡಾ.ಎ.ವಿ.ಎಂ.ಕುಟ್ಟಿ, ಪ್ರಾಂಶುಪಾಲ ಡಾ.ಹರೇಂದ್ರಕುಮಾರ್, ಉಪ ಪ್ರಾಂಶುಪಾಲ ಡಾ.ಭಾಸ್ಕರನ್, ವೈದ್ಯಕೀಯ ಸೂಪರಿಂಟೆಂಡೆಂಟ್ ಡಾ.ವಿ.ಲಕ್ಷ್ಮಯ್ಯ, ಎನ್‌ಎಸ್‌ಎಸ್ ಯೋಜನಾಧಿಕಾರಿ ಡಾ.ಎಸ್.ಎನ್. ಜಗದೀಶ್ ಪಾಲ್ಗೊಂಡಿದ್ದರು.



ಶಾಸಕ ಕೆ.ಶ್ರೀನಿವಾಸಗೌಡ ಮಾತನಾಡಿದರು

> ವೈದ್ಯಕೀಯ ವೃತ್ತಿಯಲ್ಲಿ ಹಣ ಸಂಪಾದನೆಗಿಂತ ಮಾನವೀಯತೆ ಮುಖ್ಯ. ರೋಗಿಗಳಿಗೆ ವಿಶ್ವಾಸದಿಂದ ಚಿಕಿತ್ಸೆ ನೀಡಿದರೆ ಬೇಗನೆ ಗುಣಮುಖರಾಗುತ್ತಾರೆ.
>
> -ಕೆ.ಶ್ರೀನಿವಾಸಗೌಡ, ಶಾಸಕ

ಕನ್ನಡಪ್ರಭ



### ಲಾಭಕ್ಕಾಗಿ ಆಸ್ಪತ್ರೆಗಳನ್ನು ಸ್ಥಾಪಿಸಿ ವೃತ್ತಿ ಧರ್ಮಕ್ಕೆ ಧಕ್ಕೆ ತರುತ್ತಿರುವುದು ಒಳ್ಳೆಯ ಬೆಳವಣಿಗೆಯಲ್ಲ: ಶಾಸಕ ಶ್ರೀನಿವಾಸಗೌಡ ಬೇಸರ

# ಇಂದು ಹಣಕ್ಕಾಗಿ ಹಾತೊರೆಯುತ್ತಿರುವ ವೈದ್ಯರು

• **ಕನ್ನಡಪ್ರಭ ವಾರ್ತೆ** ಕೋಲಾರ

ವೈದ್ಯಕೀಯ ಸೇವೆ ಸಮಾಜದಲ್ಲಿ ಪವಿತ್ರವಾದುದು, ವೈದ್ಯರಾದವರು ಜನಸಾಮಾನ್ಯರಿಗೆ ಉತ್ತಮ ಸೇವೆ ಕಲ್ಪಿಸಬೇಕಾದ ಅಗತ್ಯವಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಕೆಲ ವೈದ್ಯರು ಹಣದ ಲಾಭಕ್ಕಾಗಿ ಆಸ್ಪತ್ರೆಗಳನ್ನು ಸ್ಥಾಪಿಸಿ ವೃತ್ತಿಗೆ ಧಕ್ಕೆ ಉಂಟು ಮಾಡುತ್ತಿರುವುದು ಸಮಾಜದ ದೃಷ್ಟಿಯಿಂದ ಒಳ್ಳೆಯದಲ್ಲ ಎಂದು ಶಾಸಕ ಕೆ.ಶ್ರೀನಿವಾಸಗೌಡ ಆತಂಕ ವ್ಯಕ್ತಪಡಿಸಿದರು.

ನಗರದ ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಎನ್‌ಎಸ್‌ಎಸ್ ಘಟಕದಿಂದ ಸೋಮವಾರ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಯುವ ವೈದ್ಯರು ವೃತ್ತಿಗೆ ಧಕ್ಕೆ ಉಂಟಾಗದಂತೆ ಆರೋಗ್ಯ ಸೇವೆ ಸಲ್ಲಿಸಬೇಕು ಎಂದು ಕಿವಿಮಾತು ಹೇಳಿದರು.

**ಮೊದಲು ಅನುಭವ ಪಡೆದುಕೊಳ್ಳಿ:** ವೈದ್ಯಕೀಯ ಸೇವೆ ಇದು ದುಬಾರಿ ಎನಿಸಿದೆ. ಬಡವರಿಗೆ ಅಷ್ಟು ಸುಲಭವಾಗಿ ಆರೋಗ್ಯ ಸೇವೆ ಸಿಗುತ್ತಿಲ್ಲ. ಬೇರೆ ಬೇರೆ ರಾಜ್ಯಗಳಿಂದ ಆಗಮಿಸಿರುವ ವೈದ್ಯಕೀಯ ವಿದ್ಯಾರ್ಥಿಗಳು ಪದವಿ ಹಂತದಲ್ಲೇ ಕೌಶಲ ತರಬೇತಿ ಪಡೆದುಕೊಳ್ಳಬೇಕು. ಯಾವುದೇ



ಕೋಲಾರದ ನಗರದ ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಎನ್‌ಎಸ್‌ಎಸ್ ಘಟಕದಿಂದ ಸೋಮವಾರ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರಕ್ಕೆ ಶಾಸಕ ಕೆ.ಶ್ರೀನಿವಾಸಗೌಡ ಚಾಲನೆ ನೀಡಿದರು.

ಕಾಯಿಲೆಗೆ ಚಿಕಿತ್ಸೆ ನೀಡಲು ಅನುಭವ ಮುಖ್ಯ. ವ್ಯತ್ಯಸವಾದರೆ ಜನ ಸುಮ್ಮನಿರುವುದಿಲ್ಲ. ಇದರಿಂದ ವೃತ್ತಿ ಸೇವೆಗೆ ಪ್ರವೇಶ ಮಾಡುವ ಮೊದಲು ಅನುಭವ ಪಡೆದುಕೊಳ್ಳುವುದು ಸೂಕ್ತ ಎಂದರು.

ಶ್ರೀ ದೇವರಾಜ್ ಅರಸ್ ಮೆಡಿಕಲ್ ಕಾಲೇಜು ರಾಷ್ಟ್ರ ಮಟ್ಟದಲ್ಲಿ ಉತ್ತಮ ಹೆಸರು ಗಳಿಸುವ ಮೂಲಕ ದೇಶದ ಇತರೆ ರಾಜ್ಯಗಳಿಂದ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿ ಹೊಂದಲು ಆಡಳಿತ ಮಂಡಳಿ ಪ್ರಮುಖ ಪಾತ್ರವಹಿಸುತ್ತಿದೆ. ಇದು ಈ ಜಿಲ್ಲೆಗೆ ಜಾಲಪ್ಪ ನವರು ನೀಡಿರುವ

> **ರಕ್ತದಾನ ಮಾಡುವುದು ಒಳ್ಳೆಯದು. ಇದರಿಂದ ಮತ್ತೊಬ್ಬರ ಜೀವ ಉಳಿಸಿದಂತಾಗುತ್ತದೆ. ಇತ್ತೀಚಿನ ದಿನಗಳಲ್ಲಿ ವಿವಿಧ ಗುಂಪಿನ ರಕ್ತಕ್ಕೆ ಬೇಡಿಕೆ ಹೆಚ್ಚುತ್ತಿದೆ. ರಕ್ತದಾನ ಮಾಡುವುದರಿಂದ ಆರೋಗ್ಯದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂಬುದರ ಬಗ್ಗೆ ವೈದ್ಯರು ಯುವಕರಿಗೆ ತಿಳಿಸಬೇಕು. ರಕ್ತದ ಕೊರತೆಯಿಂದ ಅನಾರೋಗ್ಯಕ್ಕೆ ತುತ್ತಾಗಿರುವ ವ್ಯಕ್ತಿಗೆ ರಕ್ತದಾನ ಮಾಡುವ ಮೂಲಕ ಪ್ರಾಣ ಉಳಿಸುವ ಕೆಲಸ ಯುವಕರಿಂದಲೇ ಆಗಬೇಕು.**
>
> • **ಶ್ರೀನಿವಾಸಗೌಡ** ಶಾಸಕ

ಕೊಡುಗೆ ಎಂದು ಸ್ಮರಿಸಿದರು.

**ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಿ:** ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಗನಂದ ಕೆಂಪರಾಜ್ ಮಾತನಾಡಿ, ಎನ್‌ಎಸ್‌ಎಸ್ ಸಂಸ್ಥೆ ವಿದ್ಯಾರ್ಥಿಗಳಲ್ಲಿ ಜಾತ್ಯತೀತ ಮನೋಭಾವ ಮೂಡಿಸಿ ಭೇದಭಾವ ಹೋಗಲಾಡಿಸುತ್ತಿದೆ. ನಾವೆಲ್ಲರೂ ಒಂದೇ ಎಂಬ ಮನೋಭಾವನೆ ಕಲ್ಪಿಸುತ್ತದೆ. ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂಬ ಉದ್ದೇಶ ಗಾಂಧೀಜಿ ಅವರದಾಗಿತ್ತು. ಸಮಾಜದ ಸಮಸ್ಯೆಗಳನ್ನು ಅರಿಯುವ ಜವಾಬ್ದಾರಿಯುತ ಕರ್ತವ್ಯವನ್ನು ನಿರ್ವಹಿಸಲು ಎನ್‌ಎಸ್‌ಎಸ್ ಸಹಕಾರಿಯಾಗಿದೆ ಎಂದರು.

ಸಂಸ್ಥೆಯ ಸ್ವಯಂ ಸೇವಕರು ತಮ್ಮ ಜೀವನ ಮಟ್ಟವನ್ನು ವೃದ್ಧಿಸಿಕೊಳ್ಳಬಹುದು. ಗ್ರಾಮೀಣ ಪ್ರದೇಶದಲ್ಲಿ ಎನ್‌ಎಸ್‌ಎಸ್ ಶಿಬಿರಗಳನ್ನು ನಡೆಸುವ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕೆಲಸ ಆಗುತ್ತದೆ. ಪ್ರಕೃತಿ ವಿಕೋಪದ ಸಂದರ್ಭದಲ್ಲಿ ಮಾನವ ನಿರ್ಮಿತ ವಿಪತ್ತುಗಳನ್ನು ನಿಯಂತ್ರಿಸುವ ಪ್ರಯತ್ನ ನಡೆಯುತ್ತದೆ. ಸೇವಾಕಾರ್ಯ ಮೂಲಕ ವ್ಯಕ್ತಿತ್ವಗುಣ ಬೆಳಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ದೇವರಾಜ್ ಅರಸ್ ಉನ್ನತ ಶಿಕ್ಷಣ ಹಾಗೂ ಸಂಶೋಧನ ಸಂಸ್ಥೆಯ ಕುಲಪತಿ ಡಾ.ಎಸ್.ಕುಮಾರ್, ಉಪಕುಲಪತಿ ಡಾ.ಸಿ.ವಿ.ರಘುವೀರ್, ಕುಲಸಚಿವ ಡಾ.ಎ.ವಿ.ಎಂ.ಕುಟ್ಟಿ, ಪ್ರಾಂಶುಪಾಲ ಡಾ.ಹರೇಂದ್ರಕುಮಾರ್, ಉಪ ಪ್ರಾಂಶುಪಾಲ ಡಾ.ಭಾಸ್ಕರನ್, ವೈದ್ಯಕೀಯ ಅಧೀಕ್ಷಕ ಡಾ.ವಿ.ಲಕ್ಷ್ಮಯ್ಯ, ಎನ್‌ಎಸ್‌ಎಸ್ ಯೋಜನಾಧಿಕಾರಿ ಡಾ.ಎಸ್.ಎನ್.ಜಗದೀಶ್ ಸೇರಿದಂತೆ ಇತರರು ಹಾಜರಿದ್ದರು.

### ರಕ್ತದಾನ ಶಿಬಿರಕ್ಕೆ ಚಾಲನೆಯಿತ್ತು ಶ್ರೀನಿವಾಸಗೌಡ ಕರೆ:

# ವೈದ್ಯವೃತ್ತಿಗೆ ಕಳಂಕವನ್ನು ತರದ ರೀತಿಯಲ್ಲಿ ಯುವ ವೈದ್ಯರು ಆರೋಗ್ಯ ಸೇವೆ ಸಲ್ಲಿಸಲಿ





ಕೋಲಾರ ಸೆ ೨೪

ವೈದ್ಯ ವೃತ್ತಿಗೆ ಯಾವುದೇ ಕಳಂಕ ಬರದ ರೀತಿಂಯಲ್ಲಿ ಯುವ ವೈದ್ಯರು ಆರೋಗ್ಯ ಸೇವೆ ಸಲ್ಲಿಸುವುದು ಇಂದು ಅತ್ಯಗತ್ಯವಾಗಿದೆ ಎಂದು ಶಾಸಕ ಕೆ.ಶ್ರೀನಿವಾಸಗೌಡ ನುಡಿದರು.

ಟಮಕದ ದೇವರಾಜ ಅರಸು ವೈದ್ಯಕೀಯ ಮಹಾ ವಿದ್ಯಾಲಯದ ಎನ್ನೆಸ್ಸೆಸ್ ಘಟಕ ಆಯೋಜಿಸಿದ್ದ ರಕ್ತದಾನ ಶಿಬಿರ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಕೆಲವು ವೈದ್ಯರು ಹಣದ ಲಾಭಕ್ಕಾಗಿ ಖಾಸಗಿ ಚಿಕಿತ್ಸಾ ಲಯಗಳನ್ನು ಸ್ಥಾಪಿಸಿ ವೃತ್ತಿ ಗೌರವಕ್ಕೆ ಮಸಿ ಬಳಿಯುತ್ತಿದ್ದಾರೆ ಎಂದು ಖೇದ ವ್ಯಕ್ತಪಡಿಸಿದ ಶಾಸಕರು ವಿವಿಧ ರಾಜ್ಯಗಳಿಂದ ಆಗಮಿಸಿರುವ ವೈದ್ಯಕೀಯ ವಿದ್ಯಾರ್ಥಿಗಳು ಪದವಿ ಹಂತ ದಲ್ಲೇ ಕೌಶಲ ತರಬೇತಿ ಪಡೆದು ಕೊಳ್ಳಬೇಕು ಎಂದು ಸಲಹೆ ನೀಡಿದರು.

ರಕ್ತದಾನ ಮಾಡುವುದ ರಿಂದ ಆರೋಗ್ಯದ ಮೇಲೆ ಯಾವುದೇ ಪರಿಣಾಮ ಬೀರು ವುದಿಲ್ಲ ಎಂಬ ಬಗ್ಗೆ ವೈದ್ಯರು ಯುವಕರಿಗೆ ತಿಳಿಸಬೇಕು. ರಕ್ತದ ಕೊರತೆಯಿಂದ ಅನಾರೋಗ್ಯಕ್ಕೆ ತುತ್ತಾಗಿರುವ ವ್ಯಕ್ತಿಗೆ ರಕ್ತ ದಾನ ಮಾಡುವ ಮೂಲಕ ಪ್ರಾಣ ಉಳಿಸುವ ಕೆಲಸ ಯುವಕರಿಂದ ಆಗಬೇಕು ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ನಾಗ ನಂದ ಕೆಂಪರಾಜ್ ಅವರು ಎನ್ನೆಸ್ಸೆಸ್ ವಿದ್ಯಾರ್ಥಿಗಳಲ್ಲಿ ಜಾತ್ಯತೀತ ಮನೋಭಾವ ಮೂಡಿಸಿ ಭೇದಭಾವಗಳನ್ನು ಹೋಗಲಾಡಿಸುತ್ತಿದೆ ಎಂದು ತಿಳಿಸಿದರು.

ದೇವರಾಜ ಅರಸ್ ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆಯ ಕುಲಪತಿ ಡಾ॥ ಎಸ್. ಕುಮಾರ್, ಉಪಕುಲಪತಿ ಡಾ॥ ಸಿ.ವಿ.ರಘುವೀರ್, ರಿಜಿಸ್ಟ್ರಾರ್ ಡಾ॥ ಎ.ವಿ.ಎಂ.ಕುಟ್ಟಿ, ಪ್ರಾಂಶುಪಾಲ ಡಾ॥ಹರೇಂದ್ರ ಕುಮಾರ್, ಉಪ ಪ್ರಾಂಶುಪಾಲ ಡಾ। ಭಾಸ್ಕರನ್, ವೈದ್ಯಕೀಯ ಅಧೀಕ್ಷಕ ಡಾ॥ ಲಕ್ಷ್ಮಯ್ಯ, ಎನ್ನೆಸ್ಸೆಸ್ ಯೋಜನಾಧಿಕಾರಿ ಡಾ॥ ಎಸ್. ಎನ್.ಜಗದೀಶ್ ಹಾಜರಿದ್ದರು.

# ವೈದ್ಯರನ್ನು ರೋಗಿಗಳು ದೇವರಂತೆ ಕಾಣುತ್ತಾರೆ ಅವರನ್ನು ವಂಚಿಸದಿರಿ
# ಹಣ,ಲಾಭಕ್ಕಾಗಿ ಆಸ್ಪತ್ರೆ ಸ್ಥಾಪಿಸಿ ವೃತ್ತಿದ್ರೋಹ ಮಾಡದಿರಿ-ಶ್ರೀನಿವಾಸಗೌಡ



ಕೋಲಾರ :ಯುವ ವೈದ್ಯರು ವೃತ್ತಿಗೆ ಧಕ್ಕೆ ಉಂಟಾಗದಂತೆ ಆರೋಗ್ಯ ಸೇವೆ ಸಲ್ಲಿಸಬೇಕು ಎಂದು ಶಾಸಕ ಕೆ.ಶ್ರೀನಿವಾಸಗೌಡ ಸಲಹೆ ನೀಡಿದರು.

ನಗರ ಹೊರವಲಯದ ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಎನ್‌ಎಸ್‌ಎಸ್ ಘಟಕದಿಂದ ಸೋಮವಾರ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಕೆಲ ವೈದ್ಯರು ಹಣದ ಲಾಭಕ್ಕಾಗಿ ಆಸ್ಪತ್ರೆಗಳನ್ನು ಸ್ಥಾಪಿಸಿ ವೃತ್ತಿಗೆ ಧಕ್ಕೆ ಉಂಟು ಮಾಡುವ ಪ್ರಯತ್ನದಲ್ಲಿದ್ದಾರೆ. ಅವರನ್ನು ನೆನಪಿಸಿಕೊಂಡರೆ ಬೇಸರ ಉಂಟಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಬೇರೆ ಬೇರೆ ರಾಜ್ಯಗಳಿಂದ ಆಗಮಿಸಿರುವ ವೈದ್ಯಕೀಯ ವಿದ್ಯಾರ್ಥಿಗಳು ಪದವಿ ಹಂತದಲ್ಲೇ ಕೌಶಲ ತರಬೇತಿ ಪಡೆದುಕೊಳ್ಳಬೇಕು. ಯಾವುದೇ ಕಾಯಿಲೆಗೆ ಚಿಕಿತ್ಸೆ ನೀಡಲು ಅನುಭವ ಮುಖ್ಯ ವ್ಯತ್ಯಾಸವಾದರೆ ಜನ ಸುಮ್ಮನಿರುವುದಿಲ್ಲ. ಇದರಿಂದ ವೃತ್ತಿ ಸೇವೆಗೆ ಪ್ರವೇಶ ಮಾಡುವ ಮೊದಲು ಅನುಭವ ಪಡೆದುಕೊಳ್ಳುವುದು ಸೂಕ್ತ' ಎಂದರು.

ಇತ್ತೀಚಿನ ದಿನಗಳಲ್ಲಿ ವಿವಿಧ ಗುಂಪಿನ ರಕ್ತಕ್ಕೆ ಬೇಡಿಕೆ ಹೆಚ್ಚುತ್ತಿದೆ. ರಕ್ತದಾನ ಮಾಡುವುದರಿಂದ ಆರೋಗ್ಯದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂಬುದರ ಬಗ್ಗೆ ವೈದ್ಯರು ಯುವಕರಿಗೆ ತಿಳಿಸಬೇಕು. ರಕ್ತದ ಕೊರತೆಯಿಂದ ಅನಾರೋಗ್ಯಕ್ಕೆ ತುತ್ತಾಗಿರುವ ವ್ಯಕ್ತಿಗೆ ರಕ್ತ ದಾನ ಮಾಡುವ ಮೂಲಕ ಪ್ರಾಣ ಉಳಿಸುವ ಕೆಲಸ ಯುವಕರಿಂದಲೇ ಅಗಬೇಕು ಎಂದು ತಿಳಿಸಿದರು.

ದೇವರಾಜ್ ಅರಸ್ ಮೆಡಿಕಲ್ ಕಾಲೇಜು ರಾಷ್ಟ್ರಮಟ್ಟದಲ್ಲಿ ಉತ್ತಮ ಹೆಸರುಗಳಿಸಿರುವ ಮೂಲಕ ದೇಶದ ಇತರೆ ರಾಜ್ಯಗಳಿಂದ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿ ಹೊಂದಲು ಆಡಳಿತ ಮಂಡಳಿ ಪ್ರಮುಖ ಪಾತ್ರವಹಿಸುತ್ತಿದೆ. ಇದು ಈ ಜಿಲ್ಲೆಗೆ ಜಾಲಪ್ಪ ನವರು ನೀಡಿರುವ ಕೊಡುಗೆ ಎಂದು ಸ್ಮರಿಸಿದರು.

ಎನ್‌ಎಸ್‌ಎಸ್ ಸಂಸ್ಥೆ ವಿದ್ಯಾರ್ಥಿ ಗಳಲ್ಲಿ ಜಾತ್ಯತೀತ ಮನೋ ಭಾವ ಮೂಡಿಸಿ ಬೇದ ಭಾವಗಳನ್ನು ಹೋಗಲಾಡಿಸುತ್ತಿದೆ. ನಾವೆಲ್ಲರೂ ಒಂದೇ ಎಂಬ ಮನೋಭಾವನೆ ಕಲ್ಪಿಸುತ್ತದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಗನಂದ ಕೆಂಪರಾಜ್ ಅಭಿಪ್ರಾಯಪಟ್ಟರು.

ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂಬ ಉದ್ದೇಶ ಗಾಂಧಿಜೀ ಅವರದಾಗಿತ್ತು. ಸಮಾಜದ ಸಮಸ್ಯೆಗಳನ್ನು ಅರಿಯುವ ಜವಾಬ್ದಾರಿಯುತ ಕರ್ತವ್ಯವನ್ನು ನಿರ್ವಹಿಸಲು ಎನ್‌ಎಸ್‌ಎಸ್ ಸಹಕಾರಿಯಾಗಿದೆ ಎಂದರು.

ಸಂಸ್ಥೆಯ ಸ್ವಯಂ ಸೇವಕರು ತಮ್ಮ ಜೀವನ ಮಟ್ಟವನ್ನು ವೃದ್ಧಿಸಿಕೊಳ್ಳಬಹುದು. ಗ್ರಾಮೀಣ ಪ್ರದೇಶದಲ್ಲಿ ಎನ್‌ಎಸ್‌ಎಸ್ ಶಿಬಿರಗಳನ್ನು ನಡೆಸುವ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕೆಲಸ ಅಗುತ್ತದೆ. ಪ್ರಕೃತಿ ವಿಕೋಪದ ಸಂದರ್ಭದಲ್ಲಿ ಮಾನದ ನಿರ್ಮಿತ ವಿಪತ್ತುಗಳನ್ನು ನಿಯಂತ್ರಿಸುವ ಪ್ರಯತ್ನ ನಡೆಯುತ್ತದೆ. ಸೇವಾಕಾರ್ಯ ಮೂಲಕ ವ್ಯಕ್ತಿತ್ವಗುಣ ಬೆಳಸಿ ಕೊಳ್ಳಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಸಮಾರಂಭದಲ್ಲಿ ದೇವರಾಜ್ ಅರಸ್ ಉನ್ನತ ಶಿಕ್ಷಣ ಹಾಗೂ ಸಂಶೋಧನ ಸಂಸ್ಥೆಯ ಕುಲಪತಿ ಡಾ.ಎಸ್.ಕುಮಾರ್, ಉಪಕುಲಪತಿ ಡಾ.ಸಿ.ವಿ.ರಘುವೀರ್, ರಿಜಿಸ್ಟ್ರಾರ್ ಡಾ.ಎ.ವಿ.ಎಂ.ಕುಟ್ಟಿ, ಪ್ರಾಂಶುಪಾಲ ಡಾ.ಹರೇಂದ್ರ ಕುಮಾರ್, ಉಪ ಪ್ರಾಂಶುಪಾಲ ಡಾ.ಭಾಸ್ಕರನ್, ವೈದ್ಯಕೀಯ ಅಧೀಕ್ಷಕ ಡಾ.ವಿ.ಲಕ್ಷ್ಮಯ್ಯ, ಎನ್‌ಎಸ್‌ಎಸ್ ಯೋಜನಾಧಿಕಾರಿ ಡಾ.ಎಸ್.ಎನ್.ಜಗದೀಶ್ ಹಾಜರಿದ್ದರು.

# ಹಣ ಸಂಪಾದನೆಗಾಗಿ ಆಸ್ಪತ್ರೆಗಳ ಮಾಡಿ ವೃತ್ತಿಗೆ ದ್ರೋಹ ಬಗೆಯಬೇಡಿ

# ವೈದ್ಯರಿಗೆ ಶಾಸಕ ಕೆ.ಶ್ರೀನಿವಾಸಗೌಡ ಕಿವಿಮಾತು



ಕೋಲಾರ,ಸೆ.24- ಯುವ ವೈದ್ಯರು ವೃತ್ತಿಗೆ ಧಕ್ಕೆ ಉಂಟಾಗದಂತೆ ಆರೋಗ್ಯ ಸೇವೆ ಸಲ್ಲಿಸಬೇಕು ಎಂದು ಶಾಸಕ ಕೆ.ಶ್ರೀನಿವಾಸಗೌಡ ಸಲಹೆ ನೀಡಿದರು.

ನಗರ ಹೊರವಲಯದ ದೇವ ರಾಜ ಅರಸು ವೈದ್ಯಕೀಯ ಮಹಾ ವಿದ್ಯಾಲಯದಲ್ಲಿ ಎನ್‌ಎಸ್‌ಎಸ್ ಘಟಕದಿಂದ ಸೋಮವಾರ ಹಮ್ಮಿ ಕೊಂಡಿದ್ದ ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಕೆಲ ವೈದ್ಯರು ಹಣದ ಲಾಭಕ್ಕಾಗಿ ಆಸ್ಪತ್ರೆಗ ಳನ್ನು ಸ್ಥಾಪಿಸಿ ವೃತ್ತಿಗೆ ಧಕ್ಕೆ ಉಂಟು ಮಾಡುವ ಪ್ರಯತ್ನದಲ್ಲಿದ್ದಾರೆ. ಅವರನ್ನು ನೆನಪಿಸಿಕೊಂಡರೆ ಬೇಸರ ಉಂಟಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದರು.

ಬೇರೆ ಬೇರೆ ರಾಜ್ಯಗಳಿಂದ ಆಗ ಮಿಸಿರುವ ವೈದ್ಯಕೀಯ ವಿದ್ಯಾರ್ಥಿ ಗಳು ಪದವಿ ಹಂತದಲ್ಲೇ ಕೌಶಲ್ಯ ತರಬೇತಿ ಪಡೆದುಕೊಳ್ಳಬೇಕು. ಯಾವುದೇ ಕಾಯಿಲೆಗೆ ಚಿಕಿತ್ಸೆ ನೀಡಲು ಅನುಭವ ಮುಖ್ಯ ವ್ಯತ್ಯಾಸವಾದರೆ ಜನ ಸುಮ್ಮನಿರುವುದಿಲ್ಲ. ಇದರಿಂದ ವೃತ್ತಿ ಸೇವೆಗೆ ಪ್ರವೇಶ ಮಾಡುವ ಮೊದಲು ಅನುಭವ ಪಡೆದುಕೊಳ್ಳು ವುದು ಸೂಕ್ತ ಎಂದರು.

ಇತ್ತೀಚಿನ ದಿನಗಳಲ್ಲಿ ವಿವಿಧ ಗುಂಪಿನ ರಕ್ತಕ್ಕೆ ಬೇಡಿಕೆ ಹೆಚ್ಚುತ್ತಿದೆ. ರಕ್ತದಾನ ಮಾಡುವುದರಿಂದ ಆರೋ ಗ್ಯದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂಬುದರ ಬಗ್ಗೆ ವೈದ್ಯರು ಯುವಕರಿಗೆ ತಿಳಿಸಬೇಕು. ರಕ್ತದ ಕೊರತೆಯಿಂದ ಅನಾರೋಗ್ಯಕ್ಕೆ ತುತ್ತಾಗಿರುವ ವ್ಯಕ್ತಿಗೆ ರಕ್ತ ದಾನ ಮಾಡುವ ಮೂಲಕ ಪ್ರಾಣ ಉಳಿಸುವ ಕೆಲಸ ಯುವಕರಿಂದಲೇ ಆಗಬೇಕು ಎಂದು ತಿಳಿಸಿದರು.

ದೇವರಾಜ್ ಅರಸ್ ಮೆಡಿಕಲ್ ಕಾಲೇಜು ರಾಷ್ಟ್ರಮಟ್ಟದಲ್ಲಿ ಉತ್ತಮ ಹೆಸರುಗಳಿಸಿರುವ ಮೂಲಕ ದೇಶದ ಇತರೆ ರಾಜ್ಯಗಳಿಂದ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿ ಹೊಂದಲು ಆಡಳಿತ ಮಂಡಳಿ ಪ್ರಮುಖ ಪಾತ್ರವಹಿಸುತ್ತಿದೆ. ಇದು ಈ ಜಿಲ್ಲೆಗೆ ಜಾಲಪ್ಪ ನವರು ನೀಡಿರುವ ಕೊಡುಗೆ ಎಂದು ಸ್ಮರಿಸಿದರು.

ಎನ್‌ಎಸ್‌ಎಸ್ ಸಂಸ್ಥೆ ವಿದ್ಯಾರ್ಥಿಗಳಲ್ಲಿ ಜಾತ್ಯತೀತ ಮನೋ ಭಾವ ಮೂಡಿಸಿ ಬೇದಭಾವಗಳನ್ನು ಹೋಗಲಾಡಿಸುತ್ತಿದೆ. ನಾವೆಲ್ಲರೂ ಒಂದೇ ಎಂಬ ಮನೋಭಾವನೆ ಕಲ್ಪಿಸುತ್ತದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಗನಂದ ಕೆಂಪರಾಜ್ ಅಭಿಪ್ರಾಯಪಟ್ಟರು.

ವಿದ್ಯಾರ್ಥಿಗಳು ಶಿಕ್ಷಣದ ಜತೆಗೆ ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂಬ ಉದ್ದೇಶ ಗಾಂಧೀಜೀ ಅವರದಾಗಿತ್ತು. ಸಮಾಜದ ಸಮಸ್ಯೆಗಳನ್ನು ಅರಿಯುವ ಜವಾಬ್ದಾರಿ ಯುತ ಕರ್ತವ್ಯವನ್ನು ನಿರ್ವಹಿಸಲು ಎನ್‌ಎಸ್‌ಎಸ್ ಸಹಕಾರಿಯಾಗಿದೆ ಎಂದರು. ಸಂಸ್ಥೆಯ ಸ್ವಯಂ ಸೇವ ಕರು ತಮ್ಮ ಜೀವನ ಮಟ್ಟವನ್ನು ವೃದ್ಧಿಸಿ ಕೊಳ್ಳಬಹುದು, ಗ್ರಾಮೀಣ ಪ್ರದೇಶದಲ್ಲಿ ಎನ್‌ಎಸ್‌ಎಸ್ ಶಿಬಿರಗಳನ್ನು ನಡೆಸುವ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕೆಲಸ ಆಗುತ್ತದೆ. ಪ್ರಕೃತಿ ವಿಕೋಪದ ಸಂದರ್ಭದಲ್ಲಿ ಮಾನವ ನಿರ್ಮಿತ ವಿಪತ್ತುಗಳನ್ನು ನಿಯಂತ್ರಿಸುವ ಪ್ರಯತ್ನ ನಡೆಯುತ್ತದೆ. ಸೇವಾಕಾರ್ಯ ಮೂಲಕ ವ್ಯಕ್ತಿತ್ವಗುಣ ಬೆಳಸಿಕೊಳ್ಳಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಸಮಾರಂಭದಲ್ಲಿ ದೇವರಾಜ್ ಅರಸ್ ಉನ್ನತ ಶಿಕ್ಷಣ ಹಾಗೂ ಸಂಶೋಧನ ಸಂಸ್ಥೆಯ ಕುಲಪತಿ ಡಾ.ಎಸ್.ಕುಮಾರ್, ಉಪಕುಲಪತಿ ಡಾ.ಸಿ.ವಿ.ರಘುವೀರ್, ರಿಜಿಸ್ಟ್ರಾರ್ ಡಾ.ಎ.ವಿ.ಎಂ.ಕುಟ್ಟಿ, ಪ್ರಾಂಶುಪಾಲ ಡಾ.ಹರೇಂದ್ರ ಕುಮಾರ್, ಉಪ ಪ್ರಾಂಶುಪಾಲ ಡಾ.ಭಾಸ್ಕರನ್, ವೈದ್ಯಕೀಯ ಅಧೀಕ್ಷಕ ಡಾ.ವಿ.ಲಕ್ಷ್ಮಯ್ಯ, ಎನ್‌ಎಸ್‌ಎಸ್ ಯೋಜನಾಧಿಕಾರಿ ಡಾ.ಎಸ್.ಎನ್.ಜಗದೀಶ್ ಹಾಜರಿದ್ದರು.